ಕರ್ನಾಟಕ ಸರ್ಕಾರ

ದಿನಾಂಕ: 13-05-2017

# ಕೇಂದ್ರ ಸರ್ಕಾರ ಸಹಕರಿಸಿದರೆ ಸಾಲ ಮನ್ನಾ: ಮುಖ್ಯಮಂತ್ರಿ ಸಿದ್ದರಾಮಯ್ಯ



ಚಿತ್ರದುರ್ಗ, ಮೇ 13

ರಾಜ್ಯದಲ್ಲಿ ರೈತರ ಸಾಲ 52 ಸಾವಿರ ಕೋಟಿ ರೂ. ಗಳಷ್ಟಿದ್ದು, ಅದರಲ್ಲಿ 42 ಸಾವಿರ ಕೋಟಿ ರೂ. ಗಳಷ್ಟು ಸಾಲ ಕೇಂದ್ರ ಸರ್ಕಾರದ ಸ್ವಾಮ್ಯದ ಬ್ಯಾಂಕುಗಳದ್ದು. ಕೇಂದ್ರ ಸರ್ಕಾರ ಸಹಕರಿಸಿದಲ್ಲಿ ರೈತರ ಸಾಲ ಮನ್ನಾ ಮಾಡಲು ರಾಜ್ಯ ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಇಲ್ಲಿ ತಿಳಿಸಿದರು.

ಅವರು ತಮ್ಮ ನೇತೃತ್ವದ ಸರ್ಕಾರ ನಾಲ್ಕು ವರ್ಷ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ಇಂದು ಚಿತ್ರದುರ್ಗದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಏರ್ಪಡಿಸಿದ್ದ "ಸೌಲಭ್ಯ ವಿತರಣೆಯೇ ಸಂಭ್ರಮ- ಜನರಿಗೆ ಮನನ- ಜನರಿಗೆ ನಮನ" ಎಂಬ ಕಾರ್ಯಕ್ರಮದಲ್ಲಿ ಬೆಂಗಳೂರು ವಿಭಾಗದ 9 ಜಿಲ್ಲೆಗಳ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಿ ಮಾತನಾಡುತ್ತಿದ್ದರು.

ಕೇಂದ್ರ ಸರ್ಕಾರ ವಾಣಿಜ್ಯ ಬ್ಯಾಂಕುಗಳ ಸಾಲವನ್ನು ಮನ್ನಾ ಮಾಡಿದಲ್ಲಿ ಸಹಕಾರಿ ಬ್ಯಾಂಕುಗಳಲ್ಲಿನ ಸಾಲ ಮನ್ನಾ ಮಾಡಲು ರಾಜ್ಯ ಸರ್ಕಾರ ಸಿದ್ಧವಿದೆ ಎಂದು ಅವರು ತಿಳಿಸಿದರು.

ರಾಜ್ಯ ಸರ್ಕಾರ ಬರಗಾಲವನ್ನು ಅತ್ಯಂತ ದಕ್ಷವಾಗಿ ನಿರ್ವಹಿಸಿದೆ. ಉದ್ಯೋಗ, ಕುಡಿಯುವ ನೀರು, ದನಗಳಿಗೆ ಮೇವು ತೊಂದರೆಯಾಗದಂತೆ ತುರ್ತು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ

ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಇಂತಹ ಭೀಕರ ಬರಗಾಲದಲ್ಲಿಯೂ ಜನರು ಗುಳೆ ಹೋಗುವುದು ಕಡಿಮೆಯಾಗಲು ಅನ್ನ ಭಾಗ್ಯ ಕಾರಣ ಎಂದು ಅವರು ಪ್ರತಿಪಾದಿಸಿದರು.

ಚಿತ್ರದುರ್ಗದಲ್ಲಿ ಅತ್ಯಂತ ಭೀಕರ ಬರಗಾಲವಿದೆ. ಈ ವರ್ಷದ ಡಿಸೆಂಬರ್ ಒಳಗೆ ಭದ್ರಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಿ, ಜಿಲ್ಲೆಗೆ ನೀಡು ಕೊಡುತ್ತೇವೆ. ಇದಕ್ಕಾಗಿ ಆಯ ವ್ಯಯದಲ್ಲಿ ಸಾವಿರ ಕೋಟಿ ರೂ. ಮೀಸಲಿರಿಸಲಾಗಿದೆ. ಅಂತೆಯೇ ಎತ್ತಿನ ಹೊಳೆ ಮೂಲಕ ಶಾಶ್ವತ ಕುಡಿಯುವ ನೀರಿನ ಯೋಜನೆ ಜಾರಿಗೊಳಿಸುವುದು ಆದ್ಯ ಕರ್ತವ್ಯ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಕಳೆದ ನಾಲ್ಕು ವರ್ಷಗಳಲ್ಲಿ ಹಗರಣ ಮುಕ್ತ ಸರ್ಕಾರ ನಮ್ಮದು. ಪ್ರಜಾಪ್ರಭುತ್ವದ ದೊರೆಗಳು ಜನರು. ನಿಮಗೆ ಲೆಕ್ಕ ಒಪ್ಪಿಸುವುದು ನಮ್ಮ ಜವಾಬ್ದಾರಿ ಎಂದ ಮುಖ್ಯಮಂತ್ರಿಗಳು ಸಮ ಸಮಾಜದ ಕಲ್ಪನೆಯಲ್ಲಿ ನಂಬಿಕೆ ಇರುವ ಸರ್ಕಾರ ನಮ್ಮದು. ಎಲ್ಲರಿಗೂ ಸಾಮಾಜಿಕ ನ್ಯಾಯ ನೀಡುವುದು ನಮ್ಮ ಜವಾಬ್ದಾರಿ ಎಂದು ತಿಳಿಸಿದರು.

ಕಳೆದ ನಾಲ್ಕು ವರ್ಷಗಳಲ್ಲಿ 11 ಲಕ್ಷ ಮನೆ ನಿರ್ಮಿಸಿದ್ದೇವೆ. ಇನ್ನೊಂದು ವರ್ಷದಲ್ಲಿ 10 ಲಕ್ಷ ಮನೆ ಕಟ್ಟುತ್ತೇವೆ. ಕೌಶಲ್ಯ ಅಭಿವೃದ್ಧಿ ಮೂಲಕ 5 ಲಕ್ಷ ಯುವಕರಿಗೆ ಉದ್ಯೋಗ ತರಬೇತಿ ನೀಡಲು ಉದ್ದೇಶಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗದಲ್ಲಿ ಮೆಡಿಕಲ್ ಕಾಲೇಜು, ಕೆಎಸ್ಆರ್‌ಟಿಸಿ ವಿಭಾಗೀಯ ಕಚೇರಿ ಸ್ಥಳಿರಿದಂತೆ ಅನೇಕ ಯೋಜನೆಗಳನ್ನು ಘೋಷಿಸಿದರು.

ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಜನತೆಗೆ ನೀಡಿದ ಪ್ರತಿ ಆಶ್ವಾಸನೆಯನ್ನು ಈಡೇರಿಸಿದ ಸರ್ಕಾರ ನಮ್ಮದು. ಬರಗಾಲದಲ್ಲಿ ಜನ ಗುಳೆ ಹೋಗದಂತೆ ತಡೆಯುವಲ್ಲಿ ಅನ್ನಭಾಗ್ಯ ಪ್ರಮುಖ ಪಾತ್ರ ವಹಿಸಿದೆ. ನಮ್ಮ ಸರ್ಕಾರದ ಯೋಜನೆಗಳು ಎಲ್ಲ ಜಾತಿ, ವರ್ಗಗಳ ಪರವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ.ಬಿ. ಜಯಚಂದ್ರ ಅವರು ಮಾತನಾಡಿ, ಇಂದು ಸುಮಾರು 29 ಸಾವಿರ ಜನರಿಗೆ ಸೌಲಭ್ಯ ವಿತರಣೆ ಮಾಡಲಾಗಿದ್ದು, ಇದೊಂದು ಬೃಹತ್ ಕಾರ್ಯಕ್ರಮ. ಸಿದ್ದರಾಮಯ್ಯ ನೈತೃತ್ವದ ಸರ್ಕಾರದ ಅವಧಿಯಲ್ಲಿ ಭದ್ರಾ ಮೇಲ್ದಂಡೆ ಮತ್ತು ಎತ್ತಿನಹೊಳೆ ಯೋಜನೆಗಳಿಗೆ ಹೆಚ್ಚಿನ ವೇಗ ದೊರೆತಿದೆ ಎಂದು ನುಡಿದು ಮುಖ್ಯಮಂತ್ರಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಮಾತನಾಡಿ, ಸಿದ್ಧರಾಮಯ್ಯ ಮತ್ತು ಅವರ ಸರ್ಕಾರಕ್ಕೆ ಜನರು ತೋರಿಸುತ್ತಿರುವ ಪ್ರೀತಿಗೆ ನಾವು ಚಿರಋಣಿ. ಅಂದು 'ಉಳುವವನೇ ಭೂಮಿಯ ಒಡೆಯ, ಇಂದು ಇರುವವನೆ ಮನೆಯ ಒಡೆಯ'ದಂತಹ ಯೋಜನೆಗಳ ಮೂಲಕ ಸರ್ವರಿಗೂ ಸೂರು ಒದಗಿಸುವುದು ನಮ್ಮ ಉದ್ದೇಶ ಎಂದು ವಿವರಿಸಿದರು.

ಇಂಧನ ಸಚಿವ ಡಿ.ಕೆ. ಶಿವಕುಮಾರ್ ಮಾತನಾಡಿ, ಪಕ್ಷಕ್ಕೆ ಅಧಿಕಾರ ನೀಡಿದ್ದಕ್ಕಾಗಿ ನಾಡಿನ ಜನತೆಗೆ ಕೃತಜ್ಞತೆ ಅರ್ಪಿಸಿದರು. ಸಮಾಜದ ಋಣವನ್ನು ಧರ್ಮದಿಂದ ತೀರಿಸಬೇಕು. ನುಡಿದಂತೆ ನಡೆದ ಸರ್ಕಾರ ನಮ್ಮದು. ಈ ಕಾರ್ಯಕ್ರಮಗಳು ಸರ್ವ ಜಾತಿಗಳ ಬಡವರಿಗಾಗಿ; ಅಭಿವೃದ್ಧಿ ಎಂದರೆ ಎಲ್ಲಾ ವರ್ಗಗಳ ಅಭಿವೃದ್ಧಿ ಎಂದು ಬಣ್ಣಿಸಿದರು.

ಕೇಂದ್ರ ಸರ್ಕಾರವೇ ನಮ್ಮ ರಾಜ್ಯದಲ್ಲಿ ಬಂಡವಾಳ ಹೂಡಲು ವಿಶ್ವದಾದ್ಯಂತ ಹೂಡಿಕೆದಾರರನ್ನು ಆಹ್ವಾನಿಸುತ್ತಿದೆ. ನಮ್ಮ ಸರ್ಕಾರದ ಅಭಿವೃದ್ಧಿಯನ್ನು ಪಕ್ಷಭೇದ ಮರೆತು ಹೊಗಳಲಾಗುತ್ತಿದೆ ಎಂದು ನುಡಿದರು.

ಕಳೆದ ನಾಲ್ಕು ವರ್ಷಗಳಲ್ಲಿ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 1 ಲಕ್ಷಕ್ಕೂ ಹೆಚ್ಚು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಬಡವರಿಗೆ ಭೂಮಿ ಹಂಚಿದ ಹೆಗ್ಗಳಿಕೆ ನಮ್ಮ ಸರ್ಕಾರದ್ದು. ಎಂದು ಅವರು ವಿವರಿಸಿದರು.

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಮಾತನಾಡಿ, 2013 ರ ಚುನಾವಣೆಗೆ ಮುನ್ನ ನೀಡಿದ್ದ ಭರವಸೆಯಂತೆ ಸಮರ್ಥ ನಾಯಕತ್ವ ಹಾಗೂ ಸ್ವಚ್ಛ ಆಡಳಿತ ನೀಡಿದ್ದೇವೆ. ಸಿದ್ಧರಾಮಯ್ಯ ಅವರು ಮಂಡಿಸಿದ ಆಯವ್ಯಯದ ಗಾತ್ರ ವರ್ಷದಿಂದ ವರ್ಷಕ್ಕೆ ಹೆಚ್ಚಿದೆ. ಇದುವರೆಗೂ ಅವರು ಮಂಡಿಸಿದ ಆಯವ್ಯಯಗಳ ಒಟ್ಟಾರೆ ಪ್ರೆತ್ತ 7.5 ಲಕ್ಷ ಕೋಟಿ ರೂ.. ಗಳಿಗೆ ಹೆಚ್ಚು ಎಂದು ಅವರು ತಿಳಿಸಿದರು

ಸಚಿವೆ ಉಮಾಶ್ರೀ ಮಾತನಾಡಿ, ಅನ್ನಭಾಗ್ಯ ಯೋಜನೆಯನ್ನು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಖಿ. ವೀರೇಂದ್ರ ಹೆಗ್ಗಡೆಯವರೇ ಹೊಗಳಿರುವುದು ಯೋಜನೆಯ ಫಲಿತಾಂಶವನ್ನು ತಿಳಿಸುತ್ತದೆ. ಅವರ ಮೆಚ್ಚುಗೆ ಸರ್ಕಾರಕ್ಕೆ ಹೆಮ್ಮೆಯ ವಿಚಾರ ಎಂದು ತಿಳಿಸಿದರು. ಆರ್ಥಿಕವಾಗಿ ಹಿಂದುಳಿದ ಜನರ ಕಲ್ಯಾಣವೇ ನಮ್ಮ ಸರ್ಕಾರದ ಗುರಿ. ದೇಶದಲ್ಲಿ ವಿಕಲಚೇತನರಿಗೆ ಅತಿ ಹೆಚ್ಚು ಅನುದಾನ ನೀಡಿದ ಸರ್ಕಾರ ನಮ್ಮದು; ದೇಶದಲ್ಲಿ ಮಹಿಳೆಯರಿಗೆ ಬಡ್ಡಿ ರಹಿತ ಸಾಲ ನೀಡಿದ ಮೊದಲ ಸರ್ಕಾರವೂ ನಮ್ಮದೇ ಎಂದು ನುಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಮಾಜ ಕಲ್ಯಾಣ ಸಚಿವ ಎಚ್. ಆಂಜನೇಯ, ರಾಜ್ಯ ಸತತ ಬರ ಪರಿಸ್ಥಿತಿ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಸಂಭ್ರಮ ಆಚರಣೆ ಬೇಡ ಎಂದು ಮುಖ್ಯಮಂತ್ರಿಯವರು ಹೇಳಿದ್ದರು. ಆದ್ದರಿಂದ ಫಲಾನುಭವಿಗಳಿಗೆ ಸೌಲಭ್ಯ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಚಿತ್ರದುರ್ಗ ತೀವ್ರ ಬರ ಪೀಡಿತ ಜಿಲ್ಲೆಯಾದ್ದರಿಂದ ಭದ್ರಾ ಮೇಲ್ದಂಡೆ ಯೋಜನೆಯ ಮೂಲಕ ನೀರಾವರಿ ಸೌಲಭ್ಯ ಒದಗಿಸುವಚಿತೆ ಮನವಿ ಮಾಡಿದರು. ಜೊತೆಗೆ ಜಿಲ್ಲೆಗೆ ವೈದ್ಯಕೀಯ ಮಹಾವಿದ್ಯಾಲಯ, ಜವಳಿ ಪಾರ್ಕ್, ಕೌಶಲ್ಯ ಅಭಿವೃದ್ಧಿ ಕೇಂದ್ರ ಸ್ಥಾಪನೆ, ಬಸ್ ನಿಲ್ದಾಣ ಹಾಗೂ ಕೈಗಾರಿಕೆಗಳ ಸ್ಥಾಪನೆಗೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

ಸಂಸದರಾದ ಬಿ.ಎನ್. ಚಂದ್ರಪ್ಪ ಹಾಗೂ ಕೆ.ಎಚ್. ಮುನಿಯಪ್ಪ ಅವರು ಮಾತನಾಡಿ, ಸರ್ಕಾರದ ಕಾರ್ಯಕ್ರಮಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಪ್ರಾರಂಭದಲ್ಲಿ ಮೈಸೂರಿನ ನೂರಾರು ಪೌರಕಾರ್ಮಿಕರು ಚರ್ಮವಾದ್ಯಗಳನ್ನು ಬಾರಿಸಿ, ಮುಖ್ಯಮಂತ್ರಿಯವರಿಗೆ ಶುಭಕೋರಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಚಿತ್ರದುರ್ಗ ಜಿಲ್ಲೆಯ 695 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದರು. ಅಲ್ಲದೆ, 90 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳನ್ನು ಉದ್ಘಾಟಿಸಿದರು. ವಿವಿಧ ಇಲಾಖೆಗಳ ಸಾಧನೆಯ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಂತರ್ಜಾತಿ ವಿವಾಹವಾದವರಿಗೆ ಸಹಾಯಧನ ವಿತರಿಸಲಾಯಿತು.

ಸಮಾರಂಭದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಸಬಲೀಕರಣ, ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಉಮಾಶ್ರೀ, ಕಾನೂನು ಮತ್ತು ಸಣ್ಣ ನೀರಾವರಿ ಸಚಿವ ಟಿ. ಬಿ. ಜಯಚಂದ್ರ, ಯೋಜನಾ ಮತ್ತು ಸಾಂಖ್ಯಿಕ ಸಚಿವ ಎಂ.ಆರ್. ಸೀತಾರಾಮ್, ಮುಜರಾಯಿ ಸಚಿವ ರುದ್ರಪ್ಪ ಲಮಾಣಿ, ಲೋಕೋಪಯೋಗಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಎಂ. ಲಕ್ಷ್ಮೀನಾರಾಯಣ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಉಪಸ್ಥಿತರಿದ್ದರು.

------------------------